**ಪ್ರಧಾನ ಸಿವಿಲ್ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು**

**ದಾವಾ ಸಂಖ್ಯೆಃ1319/2022**

ಪಿಡಬ್ಲ್ಯುಃ 1
ಪ್ರಮಾಣ ವಚನ ಬೋಧಿಸಲಾಯಿತು
ದಿನಾಂಕಃ 13.02.2024

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ**

ನಾನು ಈ ದಾವೆಯಲ್ಲಿ ವಾದಿ ಆಗಿರುತ್ತೇನೆ. ನಾನು ನನ್ನ ಮುಖ್ಯ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವೆಂದು ಓದಿ ಸಹಿ ಮಾಡಿರುತ್ತೇನೆ.

ದಿನಾಂಕಃ28.07.2010 ರ ಮೂಲ ಕ್ರಯಪತ್ರವನ್ನು ಹಾಜರುಪಡಿಸಿದ್ದೇನೆ. ಸದರಿ ದಾಖಲೆಯನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಒಂದು ಡಿಮ್ಯಾಂಡ್ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ನ್ನು ಹಾಜರುಪಡಿಸಿದ್ದೇನೆ. ಸದರಿ ದಾಖಲೆಯನ್ನು ನಿ.ಪಿ.2 ಎಂದು ಗುರುತಿಸಲಾಯಿತು. 4 ತೆರಿಗೆ ಪಾವತಿ ರಶೀದಿಗಳನ್ನು ಹಾಜರುಪಡಿಸಿದ್ದೇನೆ. ಸದರಿ ದಾಖಲೆಗಳನ್ನು ನಿ.ಪಿ.3 ರಿಂದ ನಿ.ಪಿ.6 ಎಂದು ಗುರುತಿಸಲಾಯಿತು. ಒಂದು ಇ.ಸಿ. ಯನ್ನು ಹಾಜರುಪಡಿಸಿದ್ದೇನೆ. ಸದರಿ ದಾಖಲೆಯನ್ನು ನಿ.ಪಿ.7 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ** ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದ ಮೇರೆಗೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

ಓ.ಹೇ.ಕೆ. ಸಹಿ ಮಾಡಿದ್ದಾರೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು